# ಕರ್ನಾಟಕ ವಿಧಾನ ಪರಿಷತ್ತು

**ವಿಧಾನ ಪರಿಷತ್ತು ಸದಸ್ಯರಾದ ಮಾನ್ಯ ಶ್ರೀ ಎಸ್.ವಿ.ಸಂಕನೂರ, ಇವರು ಶೂನ್ಯ ಅವಧಿಯಲ್ಲಿ ಮಂಡಿಸಿರುವ ಪ್ರಸ್ತಾವನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**ವಿಷಯ:** ಧಾರವಾಡ ಜಿಲ್ಲೆಯ ಯರಿಕೊಪ್ಪ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ಆರ್.ಟಿ.ಐ ಕಾರ್ಯಕರ್ತರೊಬ್ಬ ನಿರಂತರ ಕಿರುಕುಳ ಕೊಟ್ಟ ಹಿನ್ನೆಲೆಯಲ್ಲಿ ವಿಷ ಸೇವನೆ ಮಾಡಿದ ವಿಷಯದ ಬಗ್ಗೆ ವಿಜಯವಾಣಿ, ವಿಜಯ ಕರ್ನಾಟಕ, ಸಂಯುಕ್ತ ಕರ್ನಾಟಕ, ಕನ್ನಡ ಪ್ರಭ, ಹೀಗೆ ವಿವಿಧ ಪತ್ರಿಕೆಗಳಲ್ಲಿ ಪ್ರಕಟವಾಗಿರುವ ವಿಷಯದ ಬಗ್ಗೆ.

*****

**ಉತ್ತರ:** ದಿನಾಂಕ:29-11-2023ರಂದು ಧಾರವಾಡ ಜಿಲ್ಲೆ, ಧಾರವಾಡ ತಾಲ್ಲೂಕಿನ ಯರಿಕೊಪ್ಪ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ನಾಗರಾಜ ಗಿನಿವಾಲದ, ಇವರಿಗೆ ಯರಿಕೊಪ್ಪ ಗ್ರಾಮ ಪಂಚಾಯತಿಯಲ್ಲಿ ಕಾನೂನು ಬಾಹಿರ ಕೆಲಸಗಳನ್ನು ಮಾಡಿಕೊಡುವಂತೆ ಶ್ರೀ ಮಲ್ಲಿಕಾರ್ಜುನ ತಂದೆ ದೇವೇಂದ್ರಪ್ಪ ರೊಟ್ಟಿಗವಾಡ ಎಂಬುವವರು ಬಹಳಷ್ಟು ಒತ್ತಡ ಮತ್ತು ಮಾನಸಿಕ ಹಿಂಸೆ ನೀಡಿದ್ದರಿಂದ ಮನನೊಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರು ವಿಷ ಸೇವಿಸಿ ಆತ್ಮಹತ್ಯೆಗೆ ಪ್ರಯತ್ನಿಸಿದ್ದು, ಶ್ರೀ ನಾಗರಾಜ್ ಗಿನಿವಾಲದರವರು ಸಾವು ಬದುಕಿನ ನಡುವೆ ಹೋರಾಟದಲ್ಲಿದ್ದಾರೆ. ಈಗಾಗಲೇ ಸಬ್ ಅರ್ಬನ್ ಪೊಲೀಸ್ ಠಾಣೆ, ಧಾರವಾಡ ಇಲ್ಲಿ ಪ್ರಕರಣ ದಾಖಲಾಗಿರುತ್ತದೆ.

ಪಂಚಾಯತಿ ಅಭಿವೃದ್ಧಿ ಅಧಿಕಾರಿಯವರಾದ ಶ್ರೀ ನಾಗರಾಜ ಗಿನಿವಾಲದ, ಇವರು ಆತ್ಮಹತ್ಯೆ ಮಾಡಿಕೊಳ್ಳುವ ಹಂತಕ್ಕೆ ತಲುಪಲು ಕಾರಣರಾದ ಶ್ರೀ ಮಲ್ಲಿಕಾರ್ಜುನ ದೇವೇಂದ್ರಪ್ಪ ರೊಟ್ಟಿಗವಾಡ, ಎಂಬುವವರನ್ನು ಈವರೆಗೂ ಕೂಡಾ ಬಂಧಿಸಿರುವುದಿಲ್ಲವೆಂದು ಕರ್ನಾಟಕ ರಾಜ್ಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ, ಜಿಲ್ಲಾ ಘಟಕ, ಧಾರವಾಡ ಮತ್ತು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಜಿಲ್ಲಾ ಘಟಕ ಧಾರವಾಡ ಸಂಘದಿಂದ ಆರೋಪಿತರನ್ನು ಬಂಧಿಸಲು ಕೋರಿ ದಿನಾಂಕ:04-12-2023ರಂದು ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ಜಿಲ್ಲಾ ಪಂಚಾಯತಿ ಕಚೇರಿ ಮುಂದೆ ಸತ್ಯಾಗ್ರಹವನ್ನು ಮಾಡಿ ಮನವಿ ಸಲ್ಲಿಸಿರುತ್ತಾರೆ.

ಆದ್ದರಿಂದ ಪ್ರಕರಣಕ್ಕೆ ಸಂಬಂಧಪಟ್ಟ ಆರೋಪಿಯನ್ನು ತಕ್ಷಣ ಬಂಧಿಸಿ, ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳುವಂತೆ ಪೊಲೀಸ್ ಆಯುಕ್ತರು, ಹುಬ್ಬಳ್ಳಿ-ಧಾರವಾಡ ನಗರ ಧಾರವಾಡರವರನ್ನು ದಿನಾಂಕ:05-12-2023ರಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಧಾರವಾಡರವರು ಕೋರಿರುತ್ತಾರೆ.

ಸಂಖ್ಯೆ:RDPR 667 GPA 2023

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.